**All India Radio: Bangalore**
**Regional Bulletin In Kannada**
**19.01.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

- ಬೆಂಗಳೂರಿನ ನವೋದ್ಯಮ ಸಂಸ್ಥೆ ಫಿಕ್ಸೆಲ್ ಸಾಧನೆ ಬಗ್ಗೆ ಮನದ ಮಾತಿನಲ್ಲಿ ಶ್ಲಾಘಿಸಿದ ಪ್ರಧಾನಿ ನರೇಂದ್ರ ಮೋದಿ
- ಆನೆಗಳ ದಾಳಿ ತಡೆಗೆ ನೇಪಿಯರ್ ಹುಲ್ಲು ಬಿತ್ತುವಂತೆ ಪ್ರಧಾನಿ ಮೋದಿ ಸಲಹೆ
- ಬೆಂಗಳೂರಿನಲ್ಲಿ ಎರಡನೇ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸರ್ಕಾರ ನಿರ್ಧಾರ; ಶೀಘ್ರವೇ ಸೂಕ್ತ ಜಾಗ ನಿಗದಿ - ಸಚಿವ ಎಂ.ಬಿ.ಪಾಟೀಲ್
- ಬೆಳಗಾವಿಯಲ್ಲಿ ಜೈಬಾಪು, ಜೈಭೀಮ್, ಜೈಸಂವಿಧಾನ್ ಸಮಾವೇಶ ಹಿನ್ನೆಲೆ; ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪರಿಶೀಲನೆ
- ಬೆಂಗಳೂರಿನಲ್ಲಿ ತುಂತುರು ಮಳೆ; ರಾಜ್ಯಾದ್ಯಂತ ಮುಂದಿನ ಐದು ದಿನ ಮಳೆ ಸಾಧ್ಯತೆ

****************

೧೧೮ನೇ ಆವೃತ್ತಿಯ ಮನ್ ಕಿ ಬಾತ್‌ನಲ್ಲಿಂದು ಪ್ರಧಾನಿ ನರೇಂದ್ರ ಮೋದಿ ದೇಶದ ಜನತೆಗೆ ಸಂವಿಧಾನದ ಮಹತ್ವದ ಬಗ್ಗೆ ತಿಳಿಸಿದ್ದಾರೆ. ಇದೇ ವೇಳೆ, ಶ್ರೇಷ್ಠ ಭಾರತ ನಿರ್ಮಾಣದಡೆಗೆ ಕಾರ್ಯ ಪ್ರವೃತ್ತರಾಗಲು ದೇಶವಾಸಿಗಳಿಗೆ ಕರೆ ನೀಡಿದ್ದಾರೆ.

ಇಂದಿನ ಮನ್ ಕಿ ಬಾತ್‌ನಲ್ಲಿ ಡಾ.ಬಿ.ಆರ್.ಅಂಬೇಡ್ಕರ್, ಡಾ.ರಾಜೇಂದ್ರ ಪ್ರಸಾದ್, ಡಾ.ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಭಾಷಣದ ತುಣಕನ್ನು ಪ್ರಸಾರ ಮಾಡಿದ ಅವರು, ನಮ್ಮ ಸಂವಿಧಾನ ರಚನೆಕಾರರು ಹೆಮ್ಮೆ ಪಡುವ ಭಾರತವನ್ನು ನಿರ್ಮಿಸುವತ್ತ ಕಾರ್ಯನಿರ್ವಹಿಸಬೇಕೆಂದು ತಿಳಿಸಿದರು.

ಇದೇ ವೇಳೆ, ಬೆಂಗಳೂರಿನ ಭಾರತೀಯ ಬಾಹ್ಯಾಕಾಶ-ತಂತ್ರಜ್ಞಾನದ ಸ್ಟಾರ್ಟ್-ಅಪ್ Pixxeಟ, ಭಾರತದ ಮೊದಲ ಖಾಸಗಿ ಉಪಗ್ರಹ ಸಮೂಹ 'ಫೈರ್‌ಫ್ಲೈ' ಅನ್ನು ಯಶಸ್ವಿಯಾಗಿ ಉಡಾವಣೆ ಮಾಡಿದೆ ಎಂದು ಹೇಳಲು ನಾನು ಹೆಮ್ಮೆಪಡುತ್ತೇನೆ ಎಂದು ತಿಳಿಸಿದ್ದಾರೆ.

ಧ್ವನಿ: ಪ್ರಧಾನಿ

ಬಾಹ್ಯಾಕಾಶದಲ್ಲಿ ಇಸ್ರೋ ವಿಜ್ಞಾನಿಗಳು ಬಿತ್ತಿದ್ದ ಅಲಸಂದೆ ಬೀಜ ಮೊಳಕೆಯೊಡೆದಿರುವುದನ್ನು ಅವರು ಶ್ಲಾಘಿಸಿದರು. ಬಾಹ್ಯಾಕಾಶ ತಂತ್ರಜ್ಞಾನದಲ್ಲಿ ಭಾರತದ ದೂರದೃಷ್ಟಿಯ ವಿಜ್ಞಾನಿಗಳು ಭವಿಷ್ಯದ ಸವಾಲುಗಳಿಗೆ ಪರಿಹಾರ ಒದಗಿಸುತ್ತಿದ್ದಾರೆ ಎಂದು ತಿಳಿಸಿದ್ದಾರೆ.

ಈ ಬಾರಿಯ ಗಣರಾಜ್ಯೋತ್ಸವವು ತುಂಬಾ ವಿಶೇಷವಾಗಿದ್ದು, ದೇಶದ ಜನತೆಗೆ ಗಣರಾಜ್ಯೋತ್ಸವದ ಶುಭಾಶಯ ಕೋರಿದರು.

ಇದೇ ವೇಳೆ, ಗ್ರಾಮಗಳಿಗೆ ಆನೆಗಳ ದಾಳಿ ಕುರಿತಂತೆ ಮಾತನಾಡಿದ ಅವರು, ಗ್ರಾಮಸ್ಥರು ಬೆಳೆದಿದ್ದ ಬೆಳೆಗಳ ಮೇಲೆ ಆನೆಗಳ ಹಿಂಡು ಮಾಡುತ್ತಿದ್ದ ದಾಳಿಯಿಂದ ಸುಮಾರು ೧೦೦ ಗ್ರಾಮಗಳ ಜನರು ಅಸಮಾಧಾನಗೊಂಡಿದ್ದರು. ಇದಕ್ಕೆ ಒಂದು ಪರಿಹಾರ ಹುಡಕಬೇಕೆಂದು ಆಲೋಚಿಸಿದ್ದರು. ಆಗ ಗ್ರಾಮಸ್ಥರು ಆನೆಯ ಬಂಧು ಎಂಬ ಒಂದು ತಂಡವನ್ನು ರಚಿಸಿ ಬಂಜರು ಪ್ರದೇಶದಲ್ಲಿ ಒಂದು ವಿಶಿಷ್ಟ ಪ್ರಯತ್ನ ಮಾಡಿದ್ದರು. ಅದುವೇ ಆನೆಗಳಿಗೆ ಪ್ರಿಯವಾದ ನೇಪಿಯರ್ ಎಂಬ ಹುಲ್ಲು ಭಿತ್ತಿ ಬೆಳೆದರು.

ಇದರಿಂದಾಗಿ ಆನೆಗಳು ಹೊಲಗಳ ಬರುವುದನ್ನು ಕಡಿಮೆ ಮಾಡಿದವು ಎಂದು ತಮ್ಮ ಮನ್ ಕಿ ಬಾತ್‌ನಲ್ಲಿ ಮೋದಿ ಹೇಳಿದರು.

ನಂತರ ಅವರು, 'ಭಾರತೀಯ ಚುನಾವಣಾ ಆಯೋಗ' ಸ್ಥಾಪನಾ ದಿನದ ಸ್ಮರಣಾರ್ಥ ಆಚರಿಸಲಾಗುವ ರಾಷ್ಟ್ರೀಯ ಮತದಾರರ ದಿನದ ಕುರಿತು ಪ್ರಸ್ತಾಪಿಸಿ, ಭಾರತ ಪ್ರಜಾಪ್ರಭುತ್ವದ ತಾಯಿಯಾಗಿದ್ದು, ಪ್ರಜಾಪ್ರಭುತ್ವದಲ್ಲಿ ಜನರ ಭಾಗವಹಿಸುವಿಕೆಗೆ ಬಹು ದೊಡ್ಡ ಸ್ಥಾನ ನೀಡಲಾಗಿದೆ ಎಂದರು.

ಧ್ವನಿ: ಪ್ರಧಾನಿ

ತಂತ್ರಜ್ಞಾನ ಬಳಕೆಯೊಂದಿಗೆ ನ್ಯಾಯಯುತ ಚುನಾವಣೆಗಳನ್ನು ನಡೆಸುತ್ತಿರುವ ಭಾರತದ ಚುನಾವಣಾ ಆಯೋಗವನ್ನು ಅವರು ಅಭಿನಂದಿಸಿದರು.

***************

ಬೆಂಗಳೂರಿನಲ್ಲಿ ೨ನೇ ವಿಮಾನ ನಿಲ್ದಾಣ ನಿರ್ಮಾಣಕ್ಕೆ ಸರ್ಕಾರ ನಿರ್ಧಾರ ಕೈಗೊಂಡಿದ್ದು, ಅತಿ ಶೀಘ್ರದಲ್ಲೇ ವಿಮಾನ ನಿಲ್ದಾಣಕ್ಕೆ ಸೂಕ್ತ ಜಾಗವನ್ನು ಸಹ ನಿಗದಿ ಮಾಡಲಾಗುವುದು ಎಂದು ಬೃಹತ್ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಅಭಿವೃದ್ಧಿ ಯೋಜನೆಗಳಿಗಾಗಿ ಕೇಂದ್ರ ಸಚಿವ ಕುಮಾರಸ್ವಾಮಿ ಸೇರಿದಂತೆ ಕೇಂದ್ರ ಸರ್ಕಾರದ ಯಾವುದೇ ಪ್ರಮುಖರನ್ನು ಭೇಟಿಯಾಗಲು ತಾವು ಸಿದ್ಧವಿರುವುದಾಗಿ ತಿಳಿಸಿದ್ದಾರೆ.

ಈಗಾಗಲೇ ತಾವು ರಕ್ಷಣಾ ಸಚಿವ ರಾಜನಾಥ್ ಸಿಂಗ್ ಹಾಗೂ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರನ್ನು ಭೇಟಿಯಾಗಿ ಬಾಕಿ ಉಳಿದಿರುವ ಕೇಂದ್ರದ ಯೋಜನೆಗಳ ಬಗ್ಗೆ ಚರ್ಚಿಸಿದ್ದೇವೆ. ಜಾಗತಿಕ ಬಂಡವಾಳ ಹೂಡಿಕೆದಾರರ ಸಮಾವೇಶಕ್ಕೆ ಆಹ್ವಾನ ನೀಡಲು ತಾವು ದೆಹಲಿಗೆ ತೆರಳುತ್ತಿದ್ದು, ಈ ಸಂದರ್ಭದಲ್ಲಿ ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಕುಮಾರಸ್ವಾಮಿ ಅವರನ್ನು ಭೇಟಿ ಮಾಡಿ ಮಾತುಕತೆ ನಡೆಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

****************

ಜನವರಿ ೨೧ರಂದು ಬೆಳಗಾವಿಯಲ್ಲಿ ಬಾಪೂ, ಜೈ ಭೀಮ್, ಜೈ ಸಂವಿಧಾನ ಸಮಾವೇಶ ಹಮ್ಮಿಕೊಳ್ಳಲಾಗಿದೆ.

ಸಂವಿಧಾನದ ಮೇಲೆ ನಂಬಿಕೆ ಇಟ್ಟಿರುವ ಯಾರೂ ಬೇಕಾದರೂ ಈ ಸಮಾವೇಶದಲ್ಲಿ ಭಾಗಿಯಾಗಬಹುದು. ಎಲ್ಲರಿಗೂ ಮುಕ್ತ ಅವಕಾಶ ನೀಡಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ.

ಬೆಳಗಾವಿಯಲ್ಲಿಂದು ಸಮಾವೇಶದ ಸಿದ್ಧತೆಗಳ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಸಮಾವೇಶದ ಯಶಸ್ಸಿಗಾಗಿ ಎಲ್ಲ ಸಚಿವರಿಗೂ ಜವಾಬ್ದಾರಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಮಹಾತ್ಮ ಗಾಂಧೀಜಿ ಅಧ್ಯಕ್ಷತೆಯಲ್ಲಿ ನಡೆದ ಕಾಂಗ್ರೆಸ್ ಸಮಾವೇಶದ ಶತಮಾನೋತ್ಸವ ಕಾರ್ಯಕ್ರಮದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ, ರಾಜ್ಯ ಸಭಾ ಸದಸ್ಯರಾದ ಸೋನಿಯಾ ಗಾಂಧಿ, ಸಂಸದೆ ಪ್ರಿಯಾಂಕಾ ಗಾಂಧಿ ಪಾಲ್ಗೊಳ್ಳಲ್ಲಿದ್ದಾರೆ ಎಂದು ಅವರು ಹೇಳಿದ್ದಾರೆ.

****************

ಜಿಲ್ಲಾ ಪೊಲೀಸ್ ಇಲಾಖೆ ಬಳ್ಳಾರಿಯಲ್ಲಿ ರಸ್ತೆ ಸುರಕ್ಷತೆ, ಅಪರಾಧ ತಡೆಗಟ್ಟುವಿಕೆ, ಸೈಬರ್ ವಂಚಕರಿಂದ ಎಚ್ಚರಿಕೆ, ಕುರಿತಂತೆ ಜಾಗೃತಿ ಮೂಡಿಸುವ ದೃಷ್ಠಿಯಿಂದ ಮ್ಯಾರಾಥಾನ್ ಓಟ ಹಮ್ಮಿಕೊಂಡಿತ್ತು.

ಐದು ಕಿ.ಮೀಟರ್ ದೂರದ ಈ ಓಟದಲ್ಲಿ ಪೊಲೀಸರಷ್ಟೇ ಅಲ್ಲದೇ ವಾಕಿಂಗ್ ಕ್ಲಬ್ ನ ಸದಸ್ಯರು, ಶಾಲಾ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ಸಾರ್ವಜನಿಕರು ಭಾಗವಹಿಸಿ ಗಮನ ಸೆಳೆದರು.

ಯಾವುದೇ ಒಂದು ಅಪರಾಧ ನಡೆದ ತಕ್ಷಣ ಪೊಲೀಸರ ಸಹಾಯವಾಣಿಗೆ ಕರೆ ಮಾಡಬೇಕು ಎಂದು ಜಾಗೃತಿ ಮೂಡಿಸಲಾಯಿತು.

ಬಳ್ಳಾರಿ ವಲಯದ ಡಿಜಿಪಿ ಲೋಕೇಶ್ ಅವರು ಮಾತನಾಡಿ, ಸೈಬರ್ ವಂಚನೆಗೆ ಒಳಗಾದ ಒಂದು ತಾಸಿನೊಳಗೆ ೧೯೩೦ ಗೆ ಕರೆ ಮಾಡಿ ಮಾಹಿತಿ ನೀಡಿ ಎಂದು ಜನರಲ್ಲಿ ಮನವಿ ಮಾಡಿದರು.

ಎಸ್ಪಿ ಡಾ. ಶೋಭಾರಾಣಿ ಮಾತನಾಡಿ, ರಸ್ತೆಯ ಸಂಚಾರಿ ನಿಯಮಗಳನ್ನು ಪಾಲಿಸಲು ಜನತೆ ಪ್ರಮಾಣ ಮಾಡಲು ಒಂದು ಆಪ್ ಸಿದ್ದಪಡಿಸಿದ್ದು, ಜನತೆ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

***************

ಇಂದು ಸಂತ ಮಹಾಯೋಗಿ ಶ್ರೀ ವೇಮನ ಜಯಂತಿ. ಶ್ರೀ ವೇಮನರ ಜಯಂತಿಯಂದು, ಗಣ್ಯರು ನಾಡಿನ ಜನತೆಗೆ ಶುಭಾಶಯ ಕೋರಿದ್ದಾರೆ. ಭಾರತೀಯ ದರ್ಶನ, ಸಾಹಿತ್ಯ ಲೋಕವನ್ನು ಶ್ರೀಮಂತಗೊಳಿಸಿದ ಸಂತಕವಿ, ಕ್ರಾಂತಿಕಾರಿ ಚಿಂತಕ, ಸಮಾಜ ಸುಧಾರಕ, ಮಹಾಯೋಗಿ ಶ್ರೀ ವೇಮನರ ಜಯಂತಿಯಂದು, ಸಮಸ್ತ ಜನತೆಗೆ ಶುಭಾಶಯಗಳು ಎಂದು ರಾಜ್ಯ ಕಾನೂನು ಹಾಗೂ ಸಂಸದೀಯ ವ್ಯವಹಾರಗಳ ಖಾತೆ ಸಚಿವರಾದ ಹೆಚ್.ಕೆ ಪಾಟೀಲ್ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ. ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಅವರು ಶ್ರೀ ವೇಮನ ಜಯಂತಿಯ ಶುಭಾಶಯ ಕೋರಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ವತಿಯಿಂದ ಮಹಾಯೋಗಿ ವೇಮನ ಜಯಂತಿಯನ್ನು ಆಚರಿಸಲಾಯಿತು.

ಮಹಾಯೋಗಿ ವೇಮನ ಜಯಂತಿಯನ್ನು ಬಳ್ಳಾರಿಯಲ್ಲಿಂದು ಆಚರಿಸಲಾಯ್ತು. ಇದರಂಗವಾಗಿ ನಗರದ ಪ್ರಮುಖ ಬೀದಿಗಳಲ್ಲಿ ವೇಮನರ ಭಾವಚಿತ್ರದ ಮೆರವಣಿಗೆ ನಡೆಯಿತು.

***************

ಕರ್ನಾಟಕ ಲೋಕಸೇವಾ ಆಯೋಗದಿಂದ ವಿವಿಧ ಇಲಾಖೆಗಳಲ್ಲಿನ ಗ್ರೂಪ್ ಬಿ ಹುದ್ದೆಗಳ ನೇಮಕಕ್ಕೆ ದಾವಣಗೆರೆಯ ೬ ಕೇಂದ್ರಗಳಲ್ಲಿಂದು ಸ್ಪರ್ಧಾತ್ಮಕ ಪರೀಕ್ಷೆಗಳು ನಡೆಯಿತು.

ಪರೀಕ್ಷೆಗಾಗಿ ೩ ಸಾವಿರದ ೪೨೨ ಅಭ್ಯರ್ಥಿಗಳು ಹೆಸರು ನೊಂದಾಯಿಸಿದ್ದು, ಇಂದು ಸಾಮಾನ್ಯ ಪ್ರಶ್ನೆ ಪತ್ರಿಕೆ ೧ ರ ಪರೀಕ್ಷೆ ಯಶಸ್ವಿಯಾಗಿ ನಡೆಯಿತು.

ಪರೀಕ್ಷೆ ಕೇಂದ್ರಗಳ ಸುತ್ತ ಮುತ್ತ ೨೦೦ ಮೀಟರ್ ವ್ಯಾಪ್ತಿಯಲ್ಲಿ ನಿಷೇದಾಜ್ಞೆ ಜಾರಿಗೊಳಿಸಲಾಗಿತ್ತು. ಹೆಚ್ಚುವರಿ ಜಿಲ್ಲಾಧಿಕಾರಿ ಲೋಕೇಶ್ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕರಿಸಿದ್ದಪ್ಪ ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

****************

ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ ಉಂಟಾಗಿರುವ ಹಿನ್ನೆಲೆಯಲ್ಲಿ ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಉಷ್ಣಾಂಶ ಗಣನೀಯ ಕುಸಿತವಾಗಿದ್ದು, ಇಂದು ಮುಂಜಾನೆಯಿಂದಲೇ ತುಂತುರು ಮಳೆಯು ಆರಂಭಗೊಂಡಿದೆ.

ಹವಾಮಾನ ಇಲಾಖೆ ವರದಿಯ ಪ್ರಕಾರ ದಕ್ಷಿಣ ಕನ್ನಡ, ಕೊಡಗು, ಮೈಸೂರು, ಚಾಮರಾಜನಗರ, ರಾಮನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ಚಿಕ್ಕಮಗಳೂರು, ಕೋಲಾರ ಮತ್ತು ಹಾಸನ ಜಿಲ್ಲೆಗಳಲ್ಲಿ ಒಣಹವೆ ಮುಂದುವರೆದಿದ್ದು, ಒಂದೆರಡು ಕಡೆಗಳಲ್ಲಿ ಸಣ್ಣ ಪ್ರಮಾಣದಲ್ಲಿ ಮಳೆಯಾಗುವ ಸಾಧ್ಯತೆಗಳಿವೆ.

ಮುಂದಿನ ಐದು ದಿನ ರಾಜ್ಯಾದ್ಯಂತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕರಾದ ಡಾ.ಸಿ.ಎಸ್.ಪಾಟೀಲ್ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ: ಸಿ.ಎಸ್.ಪಾಟೀಲ್, ಹವಾಮಾನ ನಿರ್ದೇಶಕರು

********ಮುಕ್ತಾಯ********